# ಕರ್ನಾಟಕ ವಿಧಾನ ಪರಿಷತ್

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :** 87

**ಸದಸ್ಯರ ಹೆಸರು :** ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)

**ಉತ್ತರಿಸಬೇಕಾದ ದಿನಾಂಕ :** 04-12-2023

**ಉತ್ತರಿಸುವ ಸಚಿವರು :** ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ

| | ಪ್ರಶ್ನೆ | ಉತ್ತರ |
|---|---|---|
| (ಅ) | 2022-23 ಹಾಗೂ 2023-24ನೇ ಸಾಲಿಗೆ ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಆದ ಸಿಬ್ಬಂದಿಗೆ ಅವರ ಗಳಿಕೆ ರಜೆ ನಗದೀಕರಣಕ್ಕೆ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಬಂದಿದೆ. |
| (ಆ) | ಪ್ರೌಢ ಹಾಗೂ ಪದವಿ ಪೂರ್ವ ಹಂತದಲ್ಲಿ ಇಲ್ಲಿಯವರೆಗೆ ನಿವೃತ್ತಿ ಆದ ಸಿಬ್ಬಂದಿಗೆ ಗಳಿಕೆ ರಜೆ ನಗದೀಕರಣ ಮಾಡಿಕೊಳ್ಳಲು ಎಷ್ಟು ಅನುದಾನ ಸರ್ಕಾರದಿಂದ ಬಿಡುಗಡೆ ಆಗಬೇಕಾಗಿದೆ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು) | 2022-23 ಮತ್ತು 2023-24ನೇ ಸಾಲಿಗೆ ರಾಜ್ಯದ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತಿಗೊಂಡ ಸಿಬ್ಬಂದಿಗಳಿಗೆ ಗಳಿಕೆ ರಜೆ ನಗದೀಕರಣಕ್ಕಾಗಿ ರೂ.82.90 ಕೋಟಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸಿ ನಿವೃತ್ತಿಗೊಂಡ ಸಿಬ್ಬಂದಿಗಳಿಗೆ ಗಳಿಕೆ ರಜೆ ನಗದೀಕರಣಕ್ಕಾಗಿ ರೂ.37.40 ಕೋಟಿಗಳ ಅನುದಾನ ಬಿಡುಗಡೆಗೊಳಿಸಬೇಕಾಗಿದೆ. |
| (ಇ) | ಗಳಿಕೆ ರಜೆ ನಗದೀಕರಣಕ್ಕೆ ಬಿಡುಗಡೆ ಆಗಬೇಕಾದ ಅನುದಾನವನ್ನು ಯಾವ ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು? | ಅಗತ್ಯವಿರುವ ಅನುದಾನವನ್ನು ಒದಗಿಸುವಂತೆ ಈಗಾಗಲೇ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯಿಂದ ಅನುದಾನ ಒದಗಿಸಿದ ಕೂಡಲೇ ಸಂಬಂಧಿಸಿದ ಡಿ.ಡಿ.ಓ ಗಳಿಗೆ ಅನುದಾನ ಬಿಡುಗಡೆಗೊಳಿಸಲಾಗುವುದು. |

ಇಪಿ 184 ಯೋಯೋಕ 2023

**(ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು